Akashvani : Bangalore
Regional Bulletin In Kannada
16.09.2025 / 2.30 pm
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮುಖ್ಯಮಂತ್ರಿ ನೇತೃತ್ವದಲ್ಲಿಂದು ಸಚಿವ ಸಂಪುಟ ಸಭೆ - ಕೃಷ್ಣಾ ಮೇಲ್ದಂಡೆ ಯೋಜನೆ ಭೂಸ್ವಾಧೀನ ಕುರಿತಂತೆ ಚರ್ಚೆ
- ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಇಂದು ಬೆಂಗಳೂರಿಗೆ ಭೇಟಿ - ಆಧಾರ್ ತಂತ್ರಜ್ಞಾನ ಕೇಂದ್ರದಲ್ಲಿ ಪರಿಶೀಲನಾ ಸಭೆ
- ಹೈಕೋರ್ಟ್‌ಗೆ ಮೂವರು ನ್ಯಾಯಾಧೀಶರ ನೇಮಕಕ್ಕೆ ಸುಪ್ರೀಂ ಕೋರ್ಟ್ ಕೊಲಿಜಿಯಂ ಶಿಫಾರಸ್ಸು - ಖಾಯಂ ನ್ಯಾಯಾಧೀಶರ ನೇಮಕಕ್ಕೂ ಅನುಮೋದನೆ
- ಕ್ರೈಸ್ತ ಸಮುದಾಯದ ಉಪಜಾತಿಗಳ ವರ್ಗೀಕರಣದ ಬಗ್ಗೆ ಹಿಂದುಳಿದ ವರ್ಗಗಳ ಆಯೋಗ ಸಮರ್ಥನೆ
- ದಕ್ಷಿಣ ಕನ್ನಡ ಉಡುಪಿ ಜಿಲ್ಲೆಯ ಕೆಂಪು ಕಲ್ಲು ಗಣಿಗಾರಿಕೆ ನಿಯಮ ಸಡಿಲಿಕೆ - ೧೫ ಮಂದಿಗೆ ಪರವಾನಿಗೆ

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಇಂದು ವಿಶೇಷ ಸಚಿವ ಸಂಪುಟ ಸಭೆ ನಡೆಯಲಿದೆ. ಕೃಷ್ಣಾ ಮೇಲ್ದಂಡೆ ಯೋಜನೆ- ೩ನೇ ಹಂತದ ಕಾಮಗಾರಿಗಳಿಗೆ ಅಗತ್ಯವಿರುವ ಜಮೀನಿಗೆ ಪರಿಹಾರ ನೀಡುವ ವಿಚಾರವಾಗಿ ಅಂತಿಮ ತೀರ್ಮಾನ ತೆಗೆದುಕೊಳ್ಳುವ ಕುರಿತಂತೆ ಸಭೆಯಲ್ಲಿ ಪರಿಹಾರ ದರ ನಿಗದಿ ಮಾಡುವ ಸಾಧ್ಯತೆ ಇದೆ. ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ-೩ರ ಭೂಸ್ವಾಧೀನ ಪ್ರಕ್ರಿಯೆಯನ್ನು ಒಂದೇ ಹಂತದಲ್ಲಿ ತ್ವರಿತವಾಗಿ ಕೈಗೊಳ್ಳುವುದರ ಜತೆಗೆ, ಏಕರೂಪದ ದರ ನಿಗದಿಪಡಿಸಲು ಮತ್ತು ಇತರ ಆಡಳಿತಾತ್ಮಕ ವಿಷಯಗಳಿಗೆ ಅನುಮೋದನೆ ನೀಡುವ ಕುರಿತು ಚರ್ಚೆ ನಡೆಯುವ ಸಾಧ್ಯತೆ ಇದೆ. ಯೋಜನೆ ಪೂರ್ಣಗೊಳಿಸಲು ೭೫ ಸಾವಿರ

ಎಕರೆ ಜಮೀನು ಸ್ವಾಧೀನಪಡಿಸಿಕೊಳ್ಳಬೇಕಾಗಿದೆ. ಮೂರನೇ ಹಂತದಲ್ಲಿ ಸಂತ್ರಸ್ತರು ಹೆಚ್ಚಿನ ಪರಿಹಾರ ಧನಕ್ಕಾಗಿ ನ್ಯಾಯಾಲಯಗಳ ಮೊರೆ ಹೋಗಿದ್ದಾರೆ. ಆಲಮಟ್ಟಿ ಆಣೆಕಟ್ಟಿನ ಎತ್ತರವನ್ನು ೫೧೯.೬೦ ಮೀಟರ್‌ನಿಂದ ೫೨೪.೨೫೬ ಮೀಟರ್‌ಗೆ ಹೆಚ್ಚಿಸಬೇಕಾದರೆ ಮೂರನೇ ಹಂತದಲ್ಲಿ ೧ ಲಕ್ಷ ೩೩ ಸಾವಿರ ಎಕರೆ ಭೂಮಿಯ ಸ್ವಾಧೀನವಾಗಬೇಕಿದೆ. ಈಗಾಗಲೇ ೨೯ ಸಾವಿರದ ೫೬೮ ಎಕರೆ ಭೂಸ್ವಾಧೀನವಾಗಿದೆ. ೪೪ ಸಾವಿರದ ೯೪೭ ಎಕರೆ ಭೂಸ್ವಾಧೀನ ನಾನಾ ಹಂತದಲ್ಲಿದ್ದು ಇನ್ನೂ ೫೯ ಸಾವಿರದ ೫೩೪ ಎಕರೆ ಬಾಕಿಯಿದೆ.

***************

ಕೇಂದ್ರ ರೈಲ್ವೆ, ಎಲೆಕ್ಟ್ರಾನಿಕ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಬೆಂಗಳೂರಿಗೆ ಆಗಮಿಸಿದ್ದು ಆಧಾರ್ ತಂತ್ರಜ್ಞಾನ ಕೇಂದ್ರದಲ್ಲಿ ಪರಿಶೀಲನಾ ಸಭೆ ನಡೆಸಿದ್ದಾರೆ. ಟಾಟಾ ನಗರದಲ್ಲಿನ UIಆಂI ತಂತ್ರಜ್ಞಾನ ಕೇಂದ್ರಕ್ಕೆ ಭೇಟಿ ನೀಡಿರುವ ಅವರು, ಆಧಾರ್ ತಂತ್ರಜ್ಞಾನದ ಬಗ್ಗೆ ಅಧಿಕಾರಿಗಳೊಂದಿಗೆ ಸಮಾಲೋಚನಾ ಸಭೆ ನಡೆಸಿದ್ದಾರೆ. ಆಧಾರ್ ತಂತ್ರಜ್ಞಾನಕ್ಕೆ ಸಂಬಂಧಿಸಿದಂತೆ ಅವರು ವಿವಿಧ ಸಭೆಗಳಲ್ಲಿಯೂ ಪಾಲ್ಗೊಳ್ಳಲಿದ್ದಾರೆ.

***************

ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಕೊಲಿಜಿಯಂ, ರಾಜ್ಯದ ಉಚ್ಚ ನ್ಯಾಯಾಲಯಕ್ಕೆ ಮೂವರು ನ್ಯಾಯಾಧೀಶರ ನೇಮಕಾತಿಯನ್ನು ಶಿಫಾರಸು ಮಾಡಿದೆ. ಗೀತಾ ಕಡಬ ಭರತರಾಜ ಶೆಟ್ಟಿ, ಮುರಳೀಧರ ಪೈ ಬೋರ್ಕಟ್ಟೆ ಮತ್ತು ತ್ಯಾಗರಾಜ ನಾರಾಯಣ್ ಇನವಳ್ಳಿ ಅವರನ್ನು ಹೈಕೋರ್ಟ್‌ನ ನ್ಯಾಯಾಧೀಶರನ್ನಾಗಿ ನೇಮಿಸುವ ಪ್ರಸ್ತಾವನೆಯನ್ನು ಸುಪ್ರೀಂ ಕೋರ್ಟ್ ಕೊಲಿಜಿಯಂ ಅನುಮೋದಿಸಿದೆ. ಈ ನಡುವೆ ಉಚ್ಚ ನ್ಯಾಯಾಲಯಕ್ಕೆ ಖಾಯಂ ನ್ಯಾಯಾಧೀಶರ ನೇಮಕಕ್ಕೂ ಸುಪ್ರೀಂಕೋರ್ಟ್ ಕೊಲಿಜಿಯಂ ಶಿಫಾರಸು ಮಾಡಿದೆ ಹೆಚ್ಚುವರಿ ನ್ಯಾಯಾಧೀಶರಾದ ನ್ಯಾಯಮೂರ್ತಿ ಕುರುಬರಹಳ್ಳಿ ವೆಂಕಟರಾಮರೆಡ್ಡಿ ಅರವಿಂದ್ ಅವರನ್ನು ಕರ್ನಾಟಕ ಹೈಕೋರ್ಟ್‌ನಲ್ಲಿ ಖಾಯಂ ನ್ಯಾಯಾಧೀಶರನ್ನಾಗಿ ನೇಮಕ ಮಾಡುವ ಪ್ರಸ್ತಾವನೆಯನ್ನು ಅನುಮೋದಿಸಿದೆ.

***************

ಜಾತಿ ಜನಗಣತಿಯಲ್ಲಿ ಕ್ರೈಸ್ತ ಸಮುದಾಯದೊಳಗಿನ ಉಪ ಜಾತಿಗಳ ವರ್ಗೀಕರಣವು ಧಾರ್ಮಿಕ ಮತಾಂತರವನ್ನು ಉತ್ತೇಜಿಸುತ್ತದೆ ಎಂಬ ಆರೋಪವನ್ನು ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂದನ್ ಆರ್ ನಾಯಕ್ ತಳ್ಳಿ ಹಾಕಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಸರ್ಕಾರದ ಕ್ರಮವನ್ನು ಸಮರ್ಥಿಸಿದ್ದಾರೆ. ಮತಾಂತರಗೊಂಡ ಜನರನ್ನು ಕ್ರೈಸ್ತರು ಎಂದು ಪರಿಗಣಿಸಲಾಗುತ್ತದೆ ಹೊರತು ಯಾವುದೇ ಮೀಸಲಾತಿ ನೀಡಲಾಗುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಸಾಮಾಜಿಕ-ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಅವರ ಸೇರ್ಪಡೆಯನ್ನು ನಿರಾಕರಿಸಲು ಸಾಧ್ಯವಿಲ್ಲ" ಎಂದು ಹೇಳಿದ್ದಾರೆ.

***************

ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನವನ್ನು ನಾಳೆಯಿಂದ ಅಕ್ಟೋಬರ್ ೨ರ ಗಾಂಧಿ ಜಯಂತಿವರೆಗೆ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗುತ್ತಿದೆ ಎಂದು ಉತ್ತರಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲಿಪ್ ಶಶಿ ಹೇಳಿದ್ದಾರೆ.  ಈ ಸೇವಾ ಪಾಕ್ಷಿಕ ಅಭಿಯಾನವನ್ನು ಸಂಪೂರ್ಣ ಯಶಸ್ವಿಗೊಳಿಸುವಂತೆ ಮಾಜಿ ಶಾಸಕಿ ರೂಪಾಲಿ ನಾಯ್ಕ್ ತಿಳಿಸಿದ್ದಾರೆ. ಶಿರಸಿಯಲ್ಲಿ ಭಾರತೀಯ ಜನತಾ ಪಾರ್ಟಿಯ "ಪಂಡಿತ್ ದಿನ್ ದಯಾಳ್ ಭವನದಲ್ಲಿ ಆಯೋಜಿಸಿದ್ದ ಸೇವಾ ಪಾಕ್ಷಿಕ ಅಭಿಯಾನದಲ್ಲಿ ಮಾತನಾಡಿದ ಅವರು, ಈ ಅಭಿಯಾನವನ್ನು ಜನರ ಭಾಗವಹಿಸುವಿಕೆಯೊಂದಿಗೆ, ನೈರ್ಮಲ್ಯ ಸುಧಾರಣೆಗೆ ಪ್ರಾಶಸ್ತ್ಯ ನೀಡುವ ಮೂಲಕ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಸಂಪೂರ್ಣ ನೈರ್ಮಲ್ಯ ಸಾಧಿಸಲು ಉದ್ದೇಶಿಸಲಾಗಿದೆ ಎಂದು ಹೇಳಿದ್ದಾರೆ. ಹಾವೇರಿ ಜಿಲ್ಲೆಯ  ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಕಸ ಸಂಗ್ರಹಣೆ, ವಿಲೇವಾರಿ ಮತ್ತು ಸ್ವಚ್ಛತಾ ಶ್ರಮದಾನ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಮೂಲಕ ಸಂಪೂರ್ಣ ಗ್ರಾಮವನ್ನು ಕಸಮುಕ್ತವನ್ನಾಗಿಸುವ ವಿವಿಧ ಜನಜಾಗೃತಿ ಕಾರ್ಯಕ್ರಮಗಳನ್ನು ನಾಳೆಯಿಂದ ಹಮ್ಮಿಕೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಾಣಾಧಿಕಾರಿ ರುಚಿ ಬಿಂದಲ್ ತಿಳಿಸಿದ್ದಾರೆ.

***************

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ಕೆಂಪು ಕಲ್ಲು ಗಣಿಗಾರಿಕೆ  ಸಮಸ್ಯೆ ಬಗೆಹರಿದಿದೆ ಎಂದು ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಮಾತನಾಡಿದ ಅವರು, ಕೆಂಪು ಕಲ್ಲಿಗೆ ಸಂಬಂಧಪಟ್ಟಂತೆ ಸಡಿಲಿಕೆ ಮಾಡಲಾದ ನಿಯಮಗಳಿಗೆ ಸಂಪುಟ ಅನುಮೋದನೆ ನೀಡಿದೆ. ಜಿಲ್ಲೆಯಲ್ಲಿ ೨೫ ಮಂದಿಗೆ ಪರವಾನಿಗೆ ನೀಡಲಾಗಿದ್ದು, ಎರಡು -ಮೂರು ದಿನದೊಳಗೆ ಎಸ್‌ಓಪಿ ಬರಲಿದೆ. ಶೀಘ್ರ ಎಲ್ಲಾ ಸಮಸ್ಯೆ ಗಳು ನಿವಾರಣೆ ಆಗಲಿದೆ ಎಂದು ಹೇಳಿದ್ದಾರೆ.

***************

ಧಾರವಾಡದಲ್ಲಿ ನಡೆಯುತ್ತಿರುವ ರೈತರ ಜಾತ್ರೆ ಕೃಷಿ ಮೇಳದಲ್ಲಿ ಶಿರಸಿಯ ಪ್ರಸಾದ ಹೆಗಡೆ ಅವರ ಜಮೀನಿನಲ್ಲಿ ಬೆಳೆದಿರುವ ಬಾಳೆಹಣ್ಣು ಮೇಳದಲ್ಲಿ ಹೆಚ್ಚು ಗಮನ ಸೆಳೆಯುತ್ತಿದೆ. ಈ ಬಾಳೆ ಹಣ್ಣಿನ ಒಂದೇ ಗೊನೆಯಲ್ಲಿ ಸಾವಿರಕ್ಕೂ ಹೆಚ್ಚು ಬಾಳೆ ಹಣ್ಣುಗಳು ಇದ್ದು ಎಲ್ಲರನ್ನೂ ಆಕರ್ಷಿಸುತ್ತಿದೆ. ೧೨೦ ಕ್ಕೂ ಹೆಚ್ಚು ಬಾಳೆಹಣ್ಣಿನ ಗಿಡಗಳನ್ನು ಇವರು ತಮ್ಮ ತೋಟದಲ್ಲಿ ಬೆಳೆಸಿದ್ದಾರೆ.

ಧ್ವನಿ :ಪ್ರಸಾದ ಹೆಗಡೆ, ರೈತ (  30  ಸೆಕೆಂಡುಗಳು)

***************

ಅಕ್ರಮ ಬೆಟ್ಟಿಂಗ್ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯದ ಕ್ರಿಕೆಟಿಗ ರಾಬಿನ್ ಉತ್ತಪ್ಪ ಅವರಿಗೆ ಸಂಕಷ್ಟ ಎದುರಾಗಿದೆ. ಜಾರಿ ನಿರ್ದೇಶನಾಲಯದ ಮೂಲಗಳ ಪ್ರಕಾರ ರಾಬಿನ್ ಉತ್ತಪ್ಪ ಸೋನು ಸೂದ್ ಕ್ರಿಕೆಟಿಗ ಯುವರಾಜ್ ಸಿಂಗ್ ಅವರಿಗೆ ಜಾರಿ ನಿರ್ದೇಶನಾಲಯ ಸಮನ್ಸ್ ನೀಡಿದೆ. ಇದೇ ೨೨ರಂದು ಉತ್ತಪ್ಪ ಅವರನ್ನು ವಿಚಾರಣೆಗೆ ಹಾಜರಾಗುವಂತೆ ಜಾರಿ ನಿರ್ದೇಶನಾಲಯ ಸೂಚಿಸಿದೆ.

***************

ಲಿಂಗತ್ವ ಅಲ್ಪಸಂಖ್ಯಾತರಿಗೆ ಮತದಾನದ ಹಕ್ಕಿದ್ದು, ಸರ್ಕಾರ ಮೈತ್ರಿ ಯೋಜನೆಯಡಿ ಪಿಂಚಣಿ ನೀಡಿದೆ ಎಂದು ಯಾದಗಿರಿ ಶಾಸಕ ಚೆನ್ನಾರಡ್ಡಿ ಪಾಟೀಲ್ ತುನ್ನೂರ್ ತಿಳಿಸಿದ್ದಾರೆ. ರಾಜ್ಯದ ಮೊದಲ ಲಿಂಗತ್ವ ಅಲ್ಪಸಂಖ್ಯಾತರ ನೋಂದಣಿ ಹಾಗೂ ಉಚಿತ ಆರೋಗ್ಯ ತಪಾಸಣೆ

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಲಿಂಗತ್ವ  ಅಲ್ಪಸಂಖ್ಯಾತರಿಗೆ ಉಚಿತ ನಿವೇಶನ ನೀಡುವ ಭರವಸೆ ನೀಡಿದ್ದಾರೆ. ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ಮಾತನಾಡಿ, ಲಿಂಗತ್ವ ಅಲ್ಪಸಂಖ್ಯಾತರು ತಮ್ಮ ಶಿಕ್ಷಣ, ಹಾಗೂ ಆರೋಗ್ಯದ ಬಗ್ಗೆಯೂ ಗಮನ ಹರಿಸುವಂತೆ ತಿಳಿಸಿದ್ದಾರೆ.

***************

ಕರ್ನಾಟಕ ಹಿಂದುಳಿದ ವರ್ಗಗಳ ಆಯೋಗ ರಾಜ್ಯದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಇದೇ ೨೨ರಿಂದ ಅಕ್ಟೋಬರ್ ೭ ರವರೆಗೆ ನಡೆಸಲಿದೆ. ಈ ಸಮೀಕ್ಷೆಗೆ ಸಾರ್ವಜನಿಕರು ಸೂಕ್ತ ಮಾಹಿತಿ ನೀಡಿ ಸಹಕರಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ ಬಸವರಾಜು ತಿಳಿಸಿದ್ದಾರೆ. ಜಿಲ್ಲೆಯ ಸಮುದಾಯದ ಮುಖಂಡರು ಮತ್ತು ಗ್ರಾಮ ಪಂಚಾಯಿತಿಯ ಅಧ್ಯಕ್ಷರಿಗೆ ಅರಿವು ಕಾರ್ಯಗಾರ  ಉದ್ಘಾಟಿಸಿ ಮಾತನಾಡಿದ ಅವರು, ಸಮೀಕ್ಷೆಯಲ್ಲಿ ಸುಮಾರು ೬೦ ಪ್ರಶ್ನೆಗಳಿದ್ದು ಸಮೀಕ್ಷೆ ಕಾರ್ಯವನ್ನು ಪಡಿತರ ಚೀಟಿ ಮತ್ತು ಆಧಾರ್ ಸಂಖ್ಯೆಯ ಆಧಾರದ ಮೇಲೆ ಸಮೀಕ್ಷಾದಾರರು ನಡೆಸಿದ್ದಾರೆ ಎಂದು ಹೇಳಿದ್ದಾರೆ.

***************

ಹಾವೇರಿ ಜಿಲ್ಲೆಯ ನ್ಯಾಯಾಲಯಗಳಲ್ಲಿ ಇತ್ತೀಚೆಗೆ ಜರುಗಿದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಇತ್ಯರ್ಥಕ್ಕೆ ಬಾಕಿ ಇರುವ  ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳು ಸೇರಿ ಇತ್ಯರ್ಥಕ್ಕೆ ಗುರುತಿಸಲ್ಪಟ್ಟ ೯೮ ಸಾವಿರದ ೨೬೦ ಪ್ರಕರಣಗಳಲ್ಲಿ ೮೪ ಸಾವಿರ ೫೨೪ ಪ್ರಕರಣಗಳು ಇತ್ಯರ್ಥಗೊಂಡಿವೆ. ಆರು ಕೌಟುಂಬಿಕ ಪ್ರಕರಣಗಳಲ್ಲಿ ದಂಪತಿ ರಾಜೀಮಾಡಿಕೊಂಡಿದ್ದಾರೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಿರಾದಾರ ದೇವಿಂದ್ರಪ್ಪ ಎನ್. ತಿಳಿಸಿದ್ದಾರೆ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ನೇತೃತ್ವದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ನ್ಯಾಯಾಲಯಗಳಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಮೆಗಾ ಲೋಕ ಅದಾಲತ್‌ನಲ್ಲಿ ಜಿಲ್ಲೆಯಲ್ಲಿ ಬಾಕಿ ಇದ್ದ ೪೮ ಸಾವಿರದ ೨೮೮ ಪ್ರಕರಣಗಳ ಪೈಕಿ, ೬ ಸಾವಿರದ ೫೭೫ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಬಗೆಹರಿಸಲಾಗಿದೆ. ಒಟ್ಟು ೧೭ ಕೋಟಿ

ನಲವತ್ತೈದು ಲಕ್ಷದ ೬೬ ಸಾವಿರದ ೯೪೭ ರೂಪಾಯಿಗಳ ಮೊತ್ತವನ್ನು ಇತ್ಯರ್ಥಪಡಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ.ಶಿಲ್ಪ ತಿಳಿಸಿದ್ದಾರೆ.

***************